ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ಬಗ್ಗೆ.

ಓದಲಾಗಿದೆ:

(1) ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2009, ದಿನಾಂಕ: 19-09-2011.

(2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ/ಆ.ಅ/02/2014-15/4190, ದಿನಾಂಕ: 02-03-2015.

(3) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಇವರ ಪತ್ರ ಸಂಖ್ಯೆ: ಬಿಎಂಆರ್‌ಡಿಎ/ಬಿಐಎಎಪಿಎ /ವರ್ಕ್ಸ್/51/11-12, ದಿನಾಂಕ: 16-04-2015.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಆನೇಕಲ್, ಹೊಸಕೋಟೆ, ಮಾಗಡಿ, ನೆಲಮಂಗಲ, ಕನಕಪುರ ಮತ್ತು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಹಣದಲ್ಲಿ ಶೇಕಡ 25ರಷ್ಟು ಹಣವನ್ನು ಆಡಳಿತಾತ್ಮಕ ವೆಚ್ಚಗಳಿಗೆ ಮೀಸಲಿರಿಸಿಕೊಂಡು ಉಳಿದ ಹಣದಲ್ಲಿ ರೂ.25.00 ಲಕ್ಷಗಳ ಪ್ರತಿ ಅಂದಾಜು ವೆಚ್ಚಗಳಿಗೆ ಕಡಿಮೆ ಇಲ್ಲದಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 68-ಎ(2)(ಸಿ) ರಲ್ಲಿ ಅವಕಾಶ ಕಲ್ಪಿಸಿರುವಂತೆ ಕೆಲವು ಅಭಿವೃದ್ಧಿ ಕಾರ್ಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಮತಿಯಿಂದ ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ:(2) ರ ಪತ್ರದಲ್ಲಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿನ ದೊಡ್ಡಬಳ್ಳಾಪುರ ಮತ್ತು ದೇವನಹಳ್ಳಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುತ್ತದೆ. ಆದ ಕಾರಣ ಪ್ರಾಧಿಕಾರದ 104ನೇ ಸಭೆಯ ಹೆಚ್ಚುವರಿ ವಿಷಯ ಸಂಖ್ಯೆ: 104[13(2)] ರಲ್ಲಿ ತೆಗೆದುಕೊಂಡಿರುವ ನಿರ್ಣಯದಂತೆ, ದೊಡ್ಡಬಳ್ಳಾಪುರ ನಗರಸಭೆಗೆ ಎರಡು ನೀರಿನ ಟ್ಯಾಂಕರ್‌ಗಳನ್ನು ಮತ್ತು ದೇವನಹಳ್ಳಿ ಮತ್ತು ವಿಜಯಪುರ ಪುರಸಭೆ ವ್ಯಾಪ್ತಿಗೆ ತಲಾ 1 ನೀರಿನ ಟ್ಯಾಂಕರ್‌ಗಳನ್ನು ಒದಗಿಸುವ ಸಂಬಂಧ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ದೇವನಹಳ್ಳಿ ಮತ್ತು ದೊಡ್ಡಬಳ್ಳಾಪುರ ಉಪ ವಿಭಾಗಗಳಿಗೆ ಟ್ಯಾಂಕರ್‌ಗಳನ್ನು ನಿಯಮಾನುಸಾರ ಖರೀದಿಸಿ, ಸದರಿ ನಗರಸಭೆ ಮತ್ತು ಪುರಸಭೆಗಳಿಗೆ ಹಸ್ತಾಂತರಿಸುವ ಸಲುವಾಗಿ ತಲಾ 25.00 ಲಕ್ಷ ರೂಗಳಂತೆ ಒಟ್ಟು 50.00 ಲಕ್ಷ ರೂ.ಗಳ ಅನುದಾನ ನೀಡುವ ಸಂಬಂಧ ಪ್ರಸ್ತಾವನೆಯನ್ನು ಆಡಳಿತಾತ್ಮಕ ಅನುಮೋದನೆಗಾಗಿ ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರನ್ನು ಕೋರಿರುತ್ತಾರೆ.

....2

ಮೇಲೆ ಓದಲಾದ ಕ್ರಮ ಸಂಖ್ಯೆ:(3) ರ ಪತ್ರದಲ್ಲಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ಸಲ್ಲಿಸಿರುವ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 45 ಬಿಎಂಆರ್ 2015, ಬೆಂಗಳೂರು ದಿನಾಂಕ:21-12-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಲ್ಲಿ ಲಭ್ಯವಿರುವ ಹಣದಲ್ಲಿ, ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ದೊಡ್ಡಬಳ್ಳಾಪುರ ನಗರಸಭೆಗೆ ಎರಡು ನೀರಿನ ಟ್ಯಾಂಕರ್‌ಗಳನ್ನು ಖರೀದಿಸಿ ಹಸ್ತಾಂತರಿಸಲು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ದೊಡ್ಡಬಳ್ಳಾಪುರ ಉಪವಿಭಾಗಕ್ಕೆ ರೂ. 25.00 ಲಕ್ಷ ಮೊತ್ತ ಮತ್ತು ದೇವನಹಳ್ಳಿ ಪುರಸಭೆಗೆ ಒಂದು ನೀರಿನ ಟ್ಯಾಂಕರ್‌ನ್ನು ಹಾಗೂ ವಿಜಯಪುರ ಪುರಸಭೆಗೆ ಒಂದು ನೀರಿನ ಟ್ಯಾಂಕರ್‌ನ್ನು ನಿಯಮಾನುಸಾರ ಖರೀದಿಸಿ ಹಸ್ತಾಂತರಿಸಲು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ದೇವನಹಳ್ಳಿ ಉಪ ವಿಭಾಗಕ್ಕೆ ರೂ. 25.00 ಲಕ್ಷ ಒಟ್ಟು ರೂ. 50.00 ಲಕ್ಷಗಳ (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನ ಒದಗಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 68A (2)(C) ರಡಿ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿದೆ.

(1) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಅದರಡಿ ರೂಪಿಸಿರುವ ನಿಯಮಾವಳಿ ಕಾರ್ಯವಿಧಾನವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು;
(2) ಟೆಂಡರ್ ಪ್ರಕ್ರಿಯೆಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ವಿಧಾನ ಅನುಸರಿಸತಕ್ಕದ್ದು;
(3) ಯಾವ ಯೋಜನೆಗೆ ಅನುದಾನ ನಿಗಧಿಪಡಿಸಲಾಗಿದೆಯೋ, ಅದೇ ಯೋಜನೆಗೆ ವಿನಿಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಗೆ,

(1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
(2) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
(3) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
(4) ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ಕನಕಪುರ.
(5) ಕಛೇರಿ ಪ್ರತಿ.
(6) ಹೆಚ್ಚುವರಿ ಪ್ರತಿಗಳು.